# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 365 |
| ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು.<br>(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.08.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರಗಳು</th></tr>
<tr><td>ಅ)</td><td>ಕರ್ನಾಟಕ ಪಶುವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಗಿಳ ಸಂಖ್ಯೆ ಎಷ್ಟು:</td><td>ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿ ಪ್ರಸ್ತುತ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆಯು ಈ ಕೆಳಗಿನಂತಿದೆ:-.<br><table><tr><td>1.</td><td>ಬೋಧಕ ಸಿಬ್ಬಂದಿ</td><td>286</td></tr><tr><td>2.</td><td>ಬೋಧಕೇತರ ಸಿಬ್ಬಂದಿ</td><td>226</td></tr><tr><td colspan="2">ಒಟ್ಟು</td><td>512</td></tr></table></td></tr>
<tr><td>ಆ)</td><td>ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಎಷ್ಟು ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ; ಎಲ್ಲಾ ಕಾಲೇಜುಗಳಲ್ಲಿಯೂ ಬೋಧಕ-ಬೋಧಕೇತರ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಒಟ್ಟು 09 ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು ವಿವರಗಳು ಈ ಕೆಳಗಿನಂತಿವೆ:-<br>1. ಪಶುವೈದ್ಯಕೀಯ ಮಹಾವಿದ್ಯಾಲಯ, ಬೀದರ<br>2. ಪಶುವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು.<br>3. ಪಶುವೈದ್ಯಕೀಯ ಮಹಾವಿದ್ಯಾಲಯ, ಶಿವಮೊಗ್ಗ.<br>4. ಪಶುವೈದ್ಯಕೀಯ ಮಹಾವಿದ್ಯಾಲಯ, ಹಾಸನ<br>5. ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗ.<br>6. ಪಶುವೈದ್ಯಕೀಯ ಮಹಾವಿದ್ಯಾಲಯ, ಅಥಣಿ<br>7. ಹೈನು ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು.<br>8. ಹೈನು ವಿಜ್ಞಾನ ಮಹಾವಿದ್ಯಾಲಯ, ಕಲಬುರಗಿ.<br>9. ಮೀನುಗಾರಿಕೆ ಮಹಾವಿದ್ಯಾಲಯ, ಮಂಗಳೂರು.<br><br>ಸದರಿ ಎಲ್ಲಾ ಮಹಾವಿದ್ಯಾಲಯಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಕೊರತೆ ಇರುವುದು ಗಮನಕ್ಕೆ ಬಂದಿದೆ.</td></tr>
</table>

| | | |
|---|---|---|
| ಇ) | ಕಳೆದ 3 ವರ್ಷಗಳಲ್ಲಿ ವಿವಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೈಕಿ 250 ಜನರು ನಿವೃತ್ತಿ ಹೊಂದಿರುವುದು ನಿಜವೇ; ಹಾಗಿದ್ದಲ್ಲಿ, ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲಾಗಿದೆಯೇ: | ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪೈಕಿ ಕಳೆದ 03 ವರ್ಷಗಳಲ್ಲಿ 250 ಸಿಬ್ಬಂದಿಗಳು ನಿವೃತ್ತಿ ಹೊಂದಿರುವುದಿಲ್ಲ. ಕಳೆದ ಮೂರು ವರ್ಷಗಳಲ್ಲಿ ನಿವೃತ್ತಿ ಹೊಂದಿರುವ ಸಿಬ್ಬಂದಿಗಳ ವಿವಿರ ಈ ಕೆಳಗಿನಂತಿದೆ:-<br><br>1. 2021-23ನೇ ಸಾಲಿನಲ್ಲಿ: **26** ಸಿಬ್ಬಂದಿಗಳು ನಿವೃತಿ ಹೊಂದಿರುತ್ತಾರೆ.<br>2. 2022-23ನೇ ಸಾಲಿನಲ್ಲಿ: **24** ಸಿಬ್ಬಂದಿಗಳು ನಿವೃತಿ ಹೊಂದಿರುತ್ತಾರೆ<br>3. 2023-24ನೇ ಸಾಲಿನಲ್ಲಿ: **22** ಸಿಬ್ಬಂದಿಗಳು ನಿವೃತಿ ಹೊಂದಿರುತ್ತಾರೆ<br><br>ಪ್ರಸ್ತುತ ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕರಣ ಪ್ರಕ್ರಿಯೆ ಜಾರಿಯಲ್ಲಿರುವುದರಿಂದ ಖಾಲಿ ಹುದ್ದೆಗಳ ಭರ್ತಿಯು ಪ್ರಾರಂಭವಾಗಿರುವುದಿಲ್ಲ. |
| ಈ) | ರಾಜ್ಯದ ಕರ್ನಾಟಕ ಪಶುವೈದ್ಯಕೀಯ ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಮೂಲಸೌಲಭ್ಯ ಸೂಕ್ತ ಅನುದಾನ ಶೇ.25 ಸಿಬ್ಬಂದಿ ಕಾರ್ಯನಿರ್ವಹಣೆ ಮತ್ತು ಸರ್ಕಾರದ ನಿರ್ಲಕ್ಷ್ಯದಿಂದ ವಿವಿ ಮುಚ್ಚುವ ಹಂತದಲ್ಲಿರುವುದು ನಿಜವೇ? | ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬೀದರ ಇಲ್ಲಿಗೆ ಅವಶ್ಯ ಮೂಲಸೌಲಭ್ಯ ಹಾಗೂ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳಿಂದ ಕಾರ್ಯನಿರ್ವಹಣೆ ಮಾಡಲಾಗುತ್ತಿದೆ. |

**ಸಂಖ್ಯೆ:ಪಸಂಮೀ 270 ಪಅಸೇ 2025**

ಕೆ. ವೆಂಕಟೇಶ್

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು